**<u>ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿಸಿ ನಂ. 1048/2022**

| | | | |
|---|---|---|---|
| **ಹೆಸರು** | : | **ನಾಗಪ್ಪ** | ಚಾ.ಸಾ.8 |
| **ತಂದೆಯ ಹೆಸರು** | : | **ರಾಯಪ್ಪ** | ಪ್ರಾ.ಸಾ.5 |
| **ವಯಸ್ಸು** | : | **25 ವರ್ಷ** | ದಿನಾಂಕಃ 06-11-2025 |
| **ಉದ್ಯೋಗ** | : | **ಒಕ್ಕಲುತನ** | |
| **ವಾಸಸ್ಥಳ** | : | **ತೇಗಲತಿಪ್ಪಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ಚಾಸಾ-1, 6, 7 ಮತ್ತು 9 ರವರು ನನಗೆ ಗೊತ್ತು. ನ್ಯಾಯಾಲಯದ ಮುಂದೆ ಇರುವ 1ನೇ ಆರೋಪಿ ನನಗೆ ಗೊತ್ತು. ಮೃತ ನಾಗಪ್ಪರವರು ನನಗೆ ಗೊತ್ತಿಲ್ಲ.

ನಾನು ಯಾವುದೇ ಅಪಘಾತವನ್ನು ನೋಡಿಲ್ಲ. ನಾನು ಪೋಲಿಸರಿಗೆ ಯಾವುದೇ ಹೇಳಿಕೆಯನ್ನು ನೀಡಿಲ್ಲ. ಈಗ ನೋಡುತ್ತಿರುವ ಭಾವಚಿತ್ರದಲ್ಲಿರುವ ಆಟೋವನ್ನು ನಾನು ಈ ಮೊದಲು ನೋಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಹೇಳಿಕೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕ 13-05-2022 ರಂದು ಬೆಳಗ್ಗೆ 10.50 ಗಂಟೆಗೆ ನಾನು, ಚಾಸಾ-7 ಮತ್ತು 9ರವರು ಗಡಿಕೇಶ್ವರ ಗ್ರಾಮದ ಸರ್ಕಲನಲ್ಲಿ ನಿಂತಿದ್ದೇವು ಎಂದರೆ ಸರಿಯಲ್ಲ. ಆಗ ಆರೋಪಿ ತನ್ನ ಆಟೋವನ್ನು ಅತಿ ವೇಗದಿಂದ ಚಲಾಯಿಸಿಕೊಂಡು ಒಮ್ಮೇಲ ಬ್ರೇಕ್ ಹಾಕಿದ್ದರಿಂದ ರಸ್ತೆಯ ಬದಿಗೆ ಸದರಿ ಆಟೋ ಪಲ್ಟಿಯಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಆಗ ನಾವು ಅಲ್ಲಿ ಹೋಗಿ ನೋಡಿದಾಗ ನಾಗಪ್ಪ ಕೇಳಗಡೆ ಬಿದ್ದು ಆತನ ತಲೆಗೆ ಬಾರಿ ಗಾಯವಾಗಿ ಮೆದುಳು ಹೋರಗೆ ಬಂದಿತ್ತು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. 1ನೇ ಆರೋಪಿಗೆ ಯಾವುದೇ ಗಾಯವಾಗಿರಲಿಲ್ಲ ಎಂದರೆ ಸಾಕ್ಷಿ ನಾನು ನೋಡಿಲ್ಲ ಎಂದು ನುಡಿಯುತ್ತಾರೆ. ಅಪಘಾತ 1ನೇ ಆರೋಪಿಯ ತಪ್ಪಿನಿಂದ ಆಗಿರುತ್ತದೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಈ ರೀತಿ ನಾನು ದಿನಾಂಕ 13-05-2022 ರಂದು ಹೇಳಿಕೆಯನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-7 ಎಂದು ಗುರುತಿಸಲಾಯಿತು. ಅಪಘಾತವನ್ನು ನೋಡಿದರು

ಸಹ 1ನೇ ಆರೋಪಿಯ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ NHR ವಕೀಲರಿಂದಃ** ಇಲ್ಲಾ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**C/C ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**